ನಿಗಮಗಳಲ್ಲಿ ಹಲವು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

46 (55) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಮತ್ತು ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮಗಳಲ್ಲಿ ಸರ್ಕಾರಿ/ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳೆಷ್ಟು; (ನಿಗಮವಾರು ಜಿಲ್ಲಾವಾರು ಸ್ಪಷ್ಟ ವಿವರ ನೀಡುವುದು)

(ಆ) ಈ ನಿಗಮಗಳಲ್ಲಿ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆ ಆಧಾರದ ನೌಕರರ ವಿವರ ನೀಡುವುದು ಮತ್ತು ಈ ನೌಕರರು ಎಷ್ಟು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಇಂತಹ ನೌಕರರ ಮೇಲೆ ಸಾರ್ವಜನಿಕರಿಂದ ಜಲ ಪ್ರತಿನಿಧಿಗಳಿಂದ ಭ್ರಷ್ಟಾಚಾರದ ದೂರುಗಳು ಬಂದಿದ್ದರು ಸಹ ಅಂತಹ ಗುತ್ತಿಗೆ ಆಧಾರದ ನೌಕರರನ್ನು ಅದೇ ಸ್ಥಳದಲ್ಲಿ ಮುಂದುವರೆಸಲು ಕಾರಣವೇನು ; (ಸ್ಪಷ್ಟ ಮಾಹಿತಿ ನೀಡುವುದು)

(ಈ) ಜನಪ್ರತಿನಿಧಿಗಳು ತಿಳಿಸಿದ್ದು ಅಂತಹ ಗುತ್ತಿಗೆ ನೌಕರರನ್ನು ಸರ್ಕಾರ ಕೂಡಲೇ ಸಂಬಂಧಿಸಿದ ಮೇಲಾಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಲು ಕ್ರಮವಹಿಸುವುದೇ ? (ಸಂಪೂರ್ಣ ಮಾಹಿತಿ ನೀಡುವುದು)